# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 09-03-2021 ಪ್ರಶ್ನೆ ಸಂಖ್ಯೆ : 667(853)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 09-03-2021

ಉತ್ತರಿಸುವ ಸಚಿವರು: ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

ವಿಷಯ : ನ್ಯಾಯಬೆಲೆ ಅಂಗಡಿಗಳ ಬಗ್ಗೆ

(ಅ) ಕಳೆದ ಮೂರು ವರ್ಷಗಳಲ್ಲಿ ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕು ವ್ಯಾಪ್ತಿಯಲ್ಲಿ ಪಡಿತರ ವಿತರಣೆಗೆ ಸಂಬಂಧಿಸಿದಂತೆ ನ್ಯಾಯಬೆಲೆ ಅಂಗಡಿಗಳ ವಿರುದ್ಧ ಎಷ್ಟು ದೂರುಗಳು ದಾಖಲಾಗಿವೆ; (ತಾಲ್ಲೂಕುವಾರು, ಪ್ರಕರಣವಾರು ವಿವರ ನೀಡುವುದು)

(ಆ) ಸದರಿ ನ್ಯಾಯಬೆಲೆ ಅಂಗಡಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಇ) ನಾಗಮಂಗಲ ತಾಲ್ಲೂಕು, ಬಿಂಡಿಗನವಿಲೆ ಹೋಬಳಿ, ಕಂಬದಹಳ್ಳಿ ಗ್ರಾಮದ ನ್ಯಾಯಬೆಲೆ ಅಂಗಡಿ ಮಾಲೀಕರ ವಿರುದ್ಧ ಫೋರ್ಜರಿ ಸಹಿ ಮಾಡಿ ರೇಷನ್ ದುರುಪಯೋಗ ಪಡಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಸದರಿ ನ್ಯಾಯಬೆಲೆ ಅಂಗಡಿ ಮಾಲೀಕರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ? (ವಿವರ ನೀಡುವುದು)

(ಉ) ಸಹಕಾರ ಸಂಘಗಳಲ್ಲಿ (ಸೊಸೈಟಿ) ಎಷ್ಟು ಪ್ರತಿಶತ ಸದಸ್ಯತ್ವ ಈ ವರ್ಗದ ಜನರಿಗೆ ನೀಡಬೇಕೆನ್ನುವ ನಿಯಮವಿದೆ?